**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.**

**ಸಿಸಿ ಸಂಖ್ಯೆ : 1028/2025**

ಪಿರ್ಯಾದುದಾರರು : ಕವಲಂದೆ ಪೊಲೀಸ್ ಠಾಣೆ, ನಂಜನಗೂಡು

ವಿರುದ್ದ

ಆರೋಪಿಗಳು:

1. ಮನೋಜ್ ಪಿ ಬಿನ್ ಪುಟ್ಟಸ್ವಾಮಿ 20 ವರ್ಷ
ವಾಸ: ಕೆರೆಹಳ್ಳಿ ಗ್ರಾಮ, ಚಾಮರಾಜನಗರ ತಾಲ್ಲೂಕು

*** *** ***

ಆಪಾದನೆ

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿ:10.02.2025 ರಂದು ರಾತ್ರಿ ಸುಮಾರು 7.45 ಗಂಟೆ ಸಮಯದಲ್ಲಿ ನಂಜನಗೂಡು ತಾಲೋಕು ಕವಲಂದೆ ಠಾಣಾ ಸರಹದ್ದಿನ ಕೆ ಆರ್ ಪುರ ಸರ್ಕಲ್ ಬಳಿ ಮೈಸೂರು-ಚಾಮರಾಜನಗರ ಕಡೆಗೆ ಹಾದುಹೋಗಿರುವ ಮುಖ್ಯ ರಸ್ತೆಯ ಎಡಭಾಗದಲ್ಲಿ ಚಾಸಾ.1 ರವರು ಕೆಎ-09-ಇಯು-7836 ಹೀರೋ ಹೋಂಡಾ ಸ್ಪೆಂಡರ್ ಬೈಕಿನಲ್ಲಿ ಚಾಮರಾಜನಗರ ಕಡೆಯಿಂದ ಕವಲಂದೆ ಗ್ರಾಮದ ಕಡೆ ಹೋಗುತ್ತಿದ್ದಾಗ 1 ನೇ ಆರೋಪಿತರಾದ ನೀವು ಕೆಎ-10-ಕ್ಯೂ-6980 ಪ್ಯಾಶನ್ ಪ್ರೋ ಬೈಕ್ ನಲ್ಲಿ ಕವಲಂದೆ ಕಡೆಯಿಂದ ಚಾಮರಾಜನಗರದ ಕಡೆಗೆ ಅತಿವೇಗ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ.2 ರವರ ಬೈಕಿಗೆ ಡಿಕ್ಕಿ ಮಾಡಿ ಅಪಘಾತ ಪಡಿಸಿರುತ್ತೀರಿ. ಆದ್ದರಿಂದ

1 ನೇ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದದಿಂದ ಚಾಸಾ. 1 ರವರ ಭುಜ & ಬಲಗಾಲಿಗೆ ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ. ಆದ್ದರಿಂದ 1 ನೇ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125-ಬಿ ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ 1 ನೇ ಆರೋಪಿತರಾದ ನೀವು ಸದರಿ ಅಪಘಾತದ ನಂತರ ವಾಹನವನ್ನು ನಿಲ್ಲಿಸದೆ, ಗಾಯಾಳುವಿಗೆ ಚಿಕಿತ್ಸೆಯನ್ನು ಕೊಡಿಸದೆ ಹಾಗೂ ಅಪಘಾತದ ಮಾಹಿತಿಯನ್ನು ಮಾಹಿತಿಯನ್ನು ಪೊಲೀಸರಿಗೆ ನೀಡಿದೆ ಹೊರಟುಹೋದ ಕಾರಣ ಭಾರತೀಯ ಮೋಟಾರು ಕಾಯಿದೆ ಕಲಂ 187 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ನಾಲ್ಕನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಸದರಿ ಅಪಘಾತದ ಸಮಯದಲ್ಲಿ ವಾಹನ ಚಾಲನಾ ಪರವಾನಗಿ ಇಲ್ಲದೇ ವಾಹವನ್ನು ಚಲಾಯಿಸಿದ ಕಾರಣ ಭಾರತೀಯ ಮೋಟಾರು ಕಾಯಿದೆ ಕಲಂ.3(1) ಸಹವಾಚಕ ಕಲಂ. 181 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಸದರಿ ಅಪಘಾತದ ಸಮಯದಲ್ಲಿ ವಿಮೆ ಚಾಲ್ತಿಯಲ್ಲಿದ್ದ ವಾಹನವನ್ನು ಚಲಾಯಿಸಿರುತ್ತೀರಿ. ಆದ್ದರಿಂದ, 1 ನೇ ಆರೋಪಿತರಾದ ನೀವು ಭಾರತೀಯ ಮೋಟಾರು ಕಾಯಿದೆ ಕಲಂ.146 ಸಹವಾಚಕ ಕಲಂ. 196 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

**ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**

**ಉಃ**

1. **ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**

   **ಉಃ**

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 25.03.2026 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,
ನಂಜನಗೂಡು.

**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.**

**ಸಿಸಿ ಸಂಖ್ಯೆ :1028/2025**

ಪಿರ್ಯಾದುದಾರರು : ಕವಲಂದೆ ಪೊಲೀಸ್ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು:

2. ಸಿದ್ದರಾಜು ಬಿ ಎಸ್ ಬಿನ್ ಸಿದ್ದೇಗೌಡ 47 ವರ್ಷ
ವಾಸ: ಬೆಂಡರವಾಡಿ ಗ್ರಾಮ ಮತ್ತು ಅಂಚೆ , ಚಾಮರಾಜನಗರ ತಾಲ್ಲೂಕು

*** *** ***

ಆಪಾದನೆ

ಶ್ರೀಮತಿ.ಸರಿತ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿ:10.02.2025 ರಂದು ರಾತ್ರಿ ಸುಮಾರು 7.45 ಗಂಟೆ ಸಮಯದಲ್ಲಿ ನಂಜನಗೂಡು ತಾಲೋಕು ಕವಲಂದೆ ಠಾಣಾ ಸರಹದ್ದಿನ ಕೆ ಆರ್ ಪುರ ಸರ್ಕಲ್ ಬಳಿ ಮೈಸೂರು-ಚಾಮರಾಜನಗರ ಕಡೆಗೆ ಹಾದುಹೋಗಿರುವ ಮುಖ್ಯ ರಸ್ತೆಯ ಎಡಭಾಗದಲ್ಲಿ ಚಾಸಾ.1 ರವರು ಕೆಎ-09-ಇಯು-7836 ಹೀರೋ ಹೋಂಡಾ ಸ್ಪೆಂಡರ್ ಬೈಕಿನಲ್ಲಿ ಚಾಮರಾಜನಗರ ಕಡೆಯಿಂದ ಕವಲಂದೆ ಗ್ರಾಮದ ಕಡೆ ಹೋಗುತ್ತಿದ್ದಾಗ 1 ನೇ ಆರೋಪಿಯು 2 ನೇ ಆರೋಪಿತರಾದ ನಿಮ್ಮ ಬಾಬ್ತು ಕೆಎ-10-ಕ್ಯೂ-6980 ಪ್ಯಾಶನ್ ಪ್ರೋ ಬೈಕನ್ನು ಚಲಾಯಿಸಿ ಅಪಘಾತ ಪಡಿಸಿದ್ದು, ಸದರಿ ಸಮಯದಲ್ಲಿ 1 ನೇ ಆರೋಪಿಗೆ ಡಿ ಎಲ್ ಇಲ್ಲದಿದ್ದರೂ

ಅವರಿಗೆ ಚಾಲನೆ ಮಾಡಲು ನೀಡಿರುತ್ತೀರಿ.ಆದ್ದರಿಂದ , 2 ನೇ ಆರೋಪಿಯಾದ ನೀವು 5 ಸಹವಾಚಕ ಕಲಂ.180 ರ ಐ.ಎಂ.ವಿ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿದ್ದೀರಿ ಎಂಬ ಆರೋಪಣೆ ಇದೆ.

ಕೊನೆಯದಾಗಿ, ಮೇಲ್ಕಂಡ ದಿನಾಂಕ, ವೇಳೆ ಹಾಗೂ ಸ್ಥಳದಲ್ಲಿ 2 ನೇ ಆರೋಪಿತರಾದ ನಿಮ್ಮ ಬಾಬ್ತು ವಾಹನಕ್ಕೆ ವಿಮೆ ಚಾಲ್ತಿಯಲ್ಲಿಲ್ಲದಿದ್ದರೂ ಸದರಿ ವಾಹನವನ್ನು 1 ನೇ ಆರೋಪಿಗೆ ಚಾಲನೆ ಮಾಡಲು ನೀಡಿರುತ್ತೀರಿ. ಆದ್ದರಿಂದ , 2 ನೇ ಆರೋಪಿಯಾದ ನೀವು 146 ಸಹವಾಚಕ ಕಲಂ.196 ರ ಐ.ಎಂ.ವಿ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿದ್ದೀರಿ ಎಂಬ ಆರೋಪಣೆ ಇದೆ.

2. **ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**
   **ಉಃ**

3. **ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**
   **ಉಃ**

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 25.03.2026 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,
ನಂಜನಗೂಡು.